ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 75 ಗ್ರಾಪಸ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:17-06-2019.

## ಸುತ್ತೋಲೆ

ವಿಷಯ: ವಿಕಲಚೇತನರಿಗೆ ಕೇಂದ್ರ ಹಾಗೂ ರಾಜ್ಯ ಹಣಕಾಸು ಆಯೋಗ ಅನುದಾನವನ್ನು ಒಳಗೊಂಡಂತೆ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾಗುವ ವಿವಿಧ ಯೋಜನೆಗಳಲ್ಲಿ ಶೇ.5ರಷ್ಟು ಅನುದಾನವನ್ನು ಮೀಸಲಿರಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 75 ಜಿಪಸ 2013, ದಿನಾಂಕ: 17-07-2013.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 76 ಜಿಪಸ 2013, ದಿನಾಂಕ: 17-07-2013.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 21 ಗ್ರಾಪಸ 2013, ದಿನಾಂಕ: 27-06-2013.
4. ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಗ್ರಾಅಪ 21 ಗ್ರಾಪಸ 2013, ದಿನಾಂಕ: 24-02-2014.
5. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯವರ ಅ.ಸ.ಪತ್ರ ಸಂಖ್ಯೆ:ಮಮಇ 188 ಪಿಹೆಚ್‌ಪಿ 2018(ಭಾಗ-4), ದಿನಾಂಕ:07-01-2019.

*****

ವಿಕಲಚೇತನರ ಅಭಿವೃದ್ಧಿಗಾಗಿ ಹಾಗೂ ಅವರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳು ಅನುಷ್ಠಾನಗೊಳಿಸುವ ವಿವಿಧ ಅಭಿವೃದ್ಧಿ ಯೋಜನೆಗಳಲ್ಲಿ ಶೇ.3ರಷ್ಟರ ಮೊತ್ತವನ್ನು ಕಾಯ್ದಿರಿಸಲು ಹಾಗೂ ಅದನ್ನು ವಿನಿಯೋಗಿಸಿಕೊಳ್ಳಲು ಕ್ರಿಯಾಯೋಜನೆಯನ್ನು ಸಿದ್ಧಪಡಿಸಿಕೊಳ್ಳುವಂತೆ ಈಗಾಗಲೇ ಉಲ್ಲೇಖ(1), (2), (3)ರ ಆದೇಶಗಳಲ್ಲಿ ಹಾಗೂ (4)ರ ಸೇರ್ಪಡೆ ಆದೇಶದಲ್ಲಿ ಸೂಚಿಸಲಾಗಿತ್ತು.

ಆದರೆ, 2018-19ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಯವರು ವಿಕಲಚೇತನರ ಅಭಿವೃದ್ಧಿ ಹಾಗೂ ಕಲ್ಯಾಣ ಕಾರ್ಯಕ್ರಮಗಳಿಗಾಗಿ ವಿವಿಧ ಯೋಜನೆಗಳನ್ನು ಘೋಷಿಸಿರುತ್ತಾರೆ. ಇದರನ್ವಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಲ್ಲಿ ಕೇಂದ್ರ ಹಾಗೂ ರಾಜ್ಯ ಹಣಕಾಸು ಆಯೋಗ ಅನುದಾನವನ್ನು ಒಳಗೊಂಡಂತೆ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾಗುವ ಅನುದಾನದಲ್ಲಿ ವಿಕಲಚೇತನರ ಅಭಿವೃದ್ಧಿ ಯೋಜನೆಯನ್ನು ತಯಾರಿಸುವಾಗ ಶೇ.5ರಷ್ಟನ್ನು ಕಡ್ಡಾಯವಾಗಿ ಕಾಯ್ದಿರಿಸಿ, ಕಾರ್ಯಕ್ರಮವನ್ನು ರೂಪಿಸಬೇಕಾಗಿರುತ್ತದೆ ಹಾಗೂ ಈ ಅನುದಾನವನ್ನು ಅರ್ಹ ವಿಕಲಚೇತನರ ಅಭಿವೃದ್ಧಿ ಮತ್ತು ಕಲ್ಯಾಣ ಕಾರ್ಯಕ್ರಮಗಳಿಗಾಗಿ ವಿನಿಯೋಗಿಸುವಂತೆ ಸೂಚಿಸಲಾಗಿದೆ. ಈ ಸುತ್ತೋಲೆಯನ್ವಯ ಶೇ.5ರಷ್ಟರ ಅನುದಾನವನ್ನು ವಿಕಲಚೇತನರ ಅಭಿವೃದ್ಧಿ ಕಾರ್ಯಕ್ರಮಗಳಿಗೆ ವೆಚ್ಚ ಮಾಡುವಂತೆ ಈ ಮೂಲಕ ಸೂಚಿಸಿದೆ.

P Dhesahy 17/6/2019
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

17.06.19

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.

3. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
4. ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್-1 ಮತ್ತು 2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
4. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ